ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ,
ಬೆಂಗಳೂರು ಉತ್ತರ ಜಿಲ್ಲೆ, ಕೆ.ಜಿ. ರಸ್ತೆ, ಬೆಂಗಳೂರು-2.

ನಮೂನೆ-2

ಸಂಖ್ಯೆ:ಅನು3.ಹೊ.ಶಾ.ಆ.ಮಾ.ಅನು.-36/2015-16 ದಿನಾಂಕ: 31-05-2016

ನಿಯಮ 30ರ ಉಪನಿಯಮ 5(ಬಿ)ಪ್ರಮಾಣ ಪತ್ರ ಸಂಖ್ಯೆ: 35/2016-17

ಶ್ರೀ ಜಗದ್ಗುರು ತೋಂಟದಾರ್ಯ ವಿದ್ಯಾಪೀಠ, ಗದಗ್-582101 ಇವರ ಗೌವರ್ನಿಂಗ್ ಕೌನ್ಸಿಲ್ ಕರ್ನಾಟಕ ಶಿಕ್ಷಣ ಕಾಯ್ದೆ. 1983(ಕರ್ನಾಟಕ ಆ್ಯಕ್ಟ್ 1. 1995 ಸೆಕ್ಷನ್ 31) ಮತ್ತು ಸರ್ಕಾರದ ಆದೇಶ ಸಂಖ್ಯೆ : ಇಡಿ.617.ಪಿಜಿಸಿ-2015, ದಿನಾಂಕ:23-12-2015 ರಂತೆ ದಿನಾಂಕ:31.05.2016, ಮೂವತ್ತೊಂದು-ಮೇ-ಎರಡು ಸಾವಿರದ ಹದಿನಾರರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1. | ಕ್ರ.ಸಂ. | 35/2016-17 |
| 2. | ಶಾಲೆಯ ಹೆಸರು ಮತ್ತು ವಿಳಾಸ | ಶ್ರೀ ಜಗದ್ಗುರು ತೋಂಟದಾರ್ಯ ವಿದ್ಯಾಪೀಠ ಸಂಪಿಗೆ ಮಹಾರುದ್ರಸ್ವಾಮಿ ಪ್ರಾಥಮಿಕ ಶಾಲೆ, ಚಿಕ್ಕಬಾಣಾವರ ಕೆಂಪಾಪುರ ರಸ್ತೆ, ಬೆಂಗಳೂರು, ಉತ್ತರ ವಲಯ-4 |
| 3. | ಅನುಮತಿ ನೀಡಿದ ತರಗತಿ | ಪ್ರಾಥಮಿಕ 1 ರಿಂದ 5ನೇ ತರಗತಿ ಆಂಗ್ಲ ಮಾಧ್ಯಮ |
| 4. | ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ | 2016-17 |
| 5.. | ಅನುಮತಿ ನೀಡಿದ ಮಾಧ್ಯಮ | ಆಂಗ್ಲ ಮಾಧ್ಯಮ (ಶಾಶ್ವತ ಅನುದಾನ ರಹಿತ) |
| 6. | ಶುಲ್ಕ ಪಾವತಿ ಮಾಡಿರುವ ವಿವರ | ನೊಂದಣಿ ಶುಲ್ಕ : ರೂ.25,000-00<br>ಪರಿಷ್ಕರಣಾ ಶುಲ್ಕ : ರೂ.10,000-00 |
| 7. | ಶಾಲಾ ನೊಂದಣಿಗೆ ಶಿಫಾರಸ್ಸು ಮಾಡಿದ ಅಧಿಕಾರಿಗಳ ಹೆಸರು ಹಾಗೂ ಪದನಾಮ | ಶ್ರೀಮತಿ ಮಧುಮಾಲತಿ ಪಡುವಣೆ, ವಿಷಯ ಪರಿವೀಕ್ಷಕರು, ಉಪನಿರ್ದೇಶಕರ ಕಛೇರಿ, ಬೆಂಗಳೂರು ಉತ್ತರ ಜಿಲ್ಲೆ |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ : 35 ಪುಟ ಸಂಖ್ಯೆ:64 ವಾಲ್ಯೂಂ: 03 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೊಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.

ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತುಗೊಳಪಟ್ಟು ನೀಡಲಾಗಿದೆ. ಇದರಲ್ಲಿ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ(ನೋಂದಣಿ)ಅನುಮತಿಯನ್ನು ರದ್ದುಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

1. ಈ ನೊಂದಾವಣೆಯು ನಿಯಮ-3ರ(4) ಮತ್ತು (5)ಕ್ಕೆ ಒಳಪಟ್ಟಿರುತ್ತದೆ.
2. ಗೌವರ್ನಿಂಗ್ ಕೌನ್ಸಿಲ್‌ರವರು ನಿಯಮ 4(4)ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು ನಿಯಮ 3(ಎ) ಪ್ರಕಾರ ಶಾಲೆಯನ್ನು ಅನುಮತಿ ನೀಡಿದ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸುವುದು.
3. ಶಾಲಾ ನಿವೇಶನಕ್ಕೆ ವಿಸ್ತೀರ್ಣ, ಕಟ್ಟಡ, ಪಾಠೋಪಕರಣ/ಪೀಠೋಪಕರಣಗಳು, ಸಿಬ್ಬಂದಿ ವರ್ಗ, ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
4. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿಯಿಲ್ಲದೇ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
5. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಇದೇ ಆಡಳಿತ ಮಂಡಳಿಯು, ಇದೇ ಹೆಸರಿನಲ್ಲಿ ಇದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು.
6. ಕರ್ನಾಟಕ ಸಮಗ್ರ ಶಿಕ್ಷಣ ಮಸೂದೆ 1983 ಕರ್ನಾಟಕ ಆ್ಯಕ್ಟ್ 1995 ಇದರಡಿಯಲ್ಲಿ ಬರುವ ಕಾಯಿದೆಗಳನ್ನು ತಪ್ಪದೆ ಕಟ್ಟುನಿಟ್ಟಾಗಿ ಪಾಲಿಸುವುದು.
7. ಶಿಕ್ಷಣ ಸಂಸ್ಥೆಯವರು ನಡೆಸುತ್ತಿರುವ ಶಾಲೆಗಳಿಗೆ ಸಂಬಂಧಿಸಿದಂತೆ ನೋಂದಣಿಯಾಗಿರುವ ಶಾಲೆಗಳೆಲ್ಲವು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 175 ಪಿ.ಎಂ.ಸಿ 95 ದಿನಾಂಕ:7-9-1998 ಮತ್ತು ಇಡಿ 175 ಪಿ.ಎಂ.ಸಿ 9[illegible] ದಿನಾಂಕ: 29-12-1998ರಂತೆ ಶಾಶ್ವತ ಅನುದಾನ ರಹಿತ ಶಾಲೆಗಳೆಂಬುದಾಗಿ ಪರಿಗಣಿಸಿದೆ.
8. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು (ಶಿಸ್ತು ಮತ್ತು ನಿಯಂತ್ರಣ) ನಿಯಮ 1978ರ ನಿಯಮಗಳನ್ನು ಹಾಗೂ 1999ರ ನಿಯಮಗಳನ್ನು ತಪ್ಪದೇ ಪಾಲಿಸುವುದು ಮತ್ತು ಬದ್ಧರಾಗಿರತಕ್ಕದ್ದು.
9. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ಪಾಲಿಸತಕ್ಕದ್ದು ಇಲಾಖಾ ನಿಯಮಗಳ ಪ್ರಕಾರ ತರಬೇತಿ ಮತ್ತು ವಿದ್ಯಾರ್ಹತೆ ಹೊಂದಿದ್ದ ಶಿಕ್ಷಕರನ್ನು ನೇಮಿಸತಕ್ಕದ್ದು.
10. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೊಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ 2 ತಿಂಗಳೊಳಗಾಗಿ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ತಪ್ಪದೇ ತಿಳಿಸತಕ್ಕದ್ದು. ಕ್ಷೇತ್ರಶಿಕ್ಷಣಾಧಿಕಾರಿಗಳು ಈ ಕಛೇರಿಗೆ ವರದಿ ಮಾಡತಕ್ಕದ್ದು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶವು ತಂತಾನೆ ರದ್ದಾಗುವುದು.

11. ಪ್ರತಿ ವರ್ಷವು ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆ ಹಾಗೂ ಶಿಕ್ಷಕರ ಕಾರ್ಮಿಕ ವಿಮೆ ಮಾಡಿಸುವುದು ವೇತನವನ್ನು ಬ್ಯಾಂಕ್ ಮೂಲಕ ಪಾವತಿಸುವುದು.
12. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 27 ಎಸ್.ಇ.ಪಿ 03 ದಿನಾಂಕ:13-12-2003ರ ಸೂಚನೆಗಳನ್ನು ಕಡ ಪಾಲಿಸಿ, ಶಾಲೆಯಲ್ಲಿ ನೇಮಕಗೊಂಡಿರುವ ಸಿಬ್ಬಂದಿಯವರುಗಳ ಸೇವಾ ಪುಸ್ತಕಗಳನ್ನು ತೆರೆದು ಶೈಕ್ಷಣಿಕ ಸೇವಾ ವಿವರಗಳನ್ನು ನಿಯಮಾನುಸಾರ ದಾಖಲೆ ಮಾಡಿ ಕಡ್ಡಾಯವಾಗಿ ನಿರ್ವಹಿಸುವುದು. ಯುಕೊ ಕ್ಲಬ್ ಸ್ಥಾಪನೆ ಕಡ್ಡಾಯವಾಗಿರುತ್ತದೆ.
13. ಶಾಲಾ ಶಿಕ್ಷಕರುಗಳನ್ನು ಗಣತಿ ಕಾರ್ಯಕ್ಕೆ ಕಡ್ಡಾಯವಾಗಿ ನಿಯೋಜಿಸುವುದು.
14. ವರ್ಗಾವಣೆ ಪತ್ರ ಹಾಗೂ ಕಛೇರಿಯ ವ್ಯವಹಾರವನ್ನು ಮುಖ್ಯ ಶಿಕ್ಷಕರು ಜವಾಬ್ದಾರಿಯ ಮೇಲೆ ನಿರ್ವ ದಾಖಲಾತಿ/ಹಾಜರಾತಿ ಹಾಗೂ ಶೈಕ್ಷಣಿಕ ಪ್ರಗತಿಯನ್ನು ಪ್ರತಿ ತಿಂಗಳು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸ
15. ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಯಾವುದೇ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡು ಬಂ ನೋಂದಣಿಯನ್ನು ರದ್ದುಪಡಿಸಲಾಗುವುದು.
16. ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯವಸ್ತು ನಿಗದಿಕರಣ ನಿಯಮಾವಳಿಗಳು 1995ರ ನಿಯಮ 4, 5, 6 ಮತ್ತು 8ರ ಅನ್ವಯ ಸುರಕ್ಷತಾ ಕ್ರಮಕ್ಕಾಗಿ ಶಾಲಾ ಕಡ್ಡಾಯವಾಗಿ ಉತ್ತಮ ಗುಣಮಟ್ಟದ ಮೇಲ್ಛಾವಣಿಯನ್ನು ಹೊಂದಿದ್ದು ಉತ್ತಮ ಗಾಳಿ, ಅವಕಾಶವಿರಬೇಕು. ಬಾಲಕ ಮತ್ತು ಬಾಲಕಿಯರಿಗೆ ನಿಯಮಾನುಸಾರ ಪ್ರತ್ಯೇಕ ಶೌಚಾಲಯಗಳನ್ನು ಒದ ಶುದ್ಧ ಕುಡಿಯುವ ನೀರನ್ನು ಒದಗಿಸಬೇಕು. ಶಾಲಾ ಆವರಣದಲ್ಲಿ ಅಪಾಯಕಾರಿ ಸ್ಥಳಗಳಿಗೆ ಬೇಲಿ ಹಾ ಆವರಣಕ್ಕೆ ಮಕ್ಕಳ ಸುರಕ್ಷತೆಗಾಗಿ ಕಾಂಪೌಂಡ್‌ನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು ಮತ್ತು ಬೆಂಕಿ ಆಕಸ್ಮಿ ತಪ್ಪಿಸಲು ಕಡ್ಡಾಯವಾಗಿ ಅಗ್ನಿಶಾಮಕ ಅಳವಡಿಸುವ ಮೂಲಕ ಅಗತ್ಯ ಸುರಕ್ಷತಾ ಕ್ರ ತೆಗೆದುಕೊಳ್ಳಬೇಕು.
17. ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯವಸ್ತು ನಿಗದಿಕರಣ ಇತ್ಯಾದಿ) ನಿಂ 1995ರನ್ವಯ ಇಲಾಖೆ ಮತ್ತು ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕಗಳನ್ನು ಮಾತ್ರ ಬೋಧಿಸತಕ್ಕದ್ದು ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಹೊರೆಯಾಗದಂತೆ ಕ್ರಮ ವಹಿಸುವುದು.
18. 1 ರಿಂದ 5ನೇ ತರಗತಿಯಲ್ಲಿ ಆಂಗ್ಲ ಮಾಧ್ಯಮ ಪುಸ್ತಕಗಳನ್ನು ಹೊರತುಪಡಿಸಿ ಬೇರೆ ಯಾವುದೇ ಪ ಪುಸ್ತಕಗಳನ್ನು ಹೆಚ್ಚುವರಿಯಾಗಿ ತರಗತಿಯಲ್ಲಿ ಬಳಸಬಾರದು.
19. ಅನುಮತಿ ನೀಡಿದ 5 ವರ್ಷಗಳವರೆಗೆ ಶಾಲಾ ಸ್ಥಳಾಂತರ ಮತ್ತು ಹಸ್ತಾಂತರಕ್ಕೆ ಅವಕಾಶವಿರುವುದಿಲ್ಲ.
20. ಅನುಮತಿ ಪಡೆದ 2 ತಿಂಗಳೊಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983(ಆಕ್ಟ್ 1 ಆಫ್ 1995) ಪ್ರಕಾ 36 ರಿಂದ 39ರ ರೀತ್ಯಾ ಹಾಗೂ ಇಡಿ 131 ವಿವಿಧ 98, ಬೆಂಗಳೂರು ದಿನಾಂಕ:04-11-99ರಂತೆ ನವೀಕರಣ ಹೊಂದಲು ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 137 ವಿವಿಧ 98, ಬೆಂಗಳೂರು, ದಿನಾಂಕ: 99ರ ಪ್ರಕಾರ ಸಕ್ಷಮ ಪ್ರಾಧಿಕಾರಿಗಳಿಗೆ ಅರ್ಜಿ ಸಲ್ಲಿಸತಕ್ಕದ್ದು. ಹಾಗೂ ಶಾಲೆಯನ್ನು ಪ್ರಾ ಸಂಸ್ಥೆಯವರು ನಿಗಧಿತ ಭದ್ರತಾ ಠೇವಣಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಆಡಳಿತ ಪ ಕಾರ್ಯದರ್ಶಿಗಳ ಜಂಟಿ ಖಾತೆಯಲ್ಲಿ ಇಡತಕ್ಕದ್ದು.
21. ನೆಲ ಅಂತಸ್ತಿನಲ್ಲಿಯೇ ತರಗತಿಗಳನ್ನು ನಡೆಸುವಂತೆ ಷರತ್ತು ವಿಧಿಸಿ ಆದೇಶ ನೀಡಿದೆ. ಒಂದು ವೇ ಷರತ್ತು ಪಾಲಿಸದಿದ್ದರೆ ನೀಡಿದ ಅನುಮತಿ ತಂತಾನೆ ರದ್ದಾಗುತ್ತದೆ.
22. 100 ಮೀಟರ್ ದೂರದ ಸುತ್ತಳತೆಯಲ್ಲಿ ಧೂಮಪಾನ ನಿಷೇದ ಫಲಕ ಅಳವಡಿಸುವುದು ಕಡ್ಡಾಯವಾಗಿರ
23. ಶಾಲಾ ವಾಹನಗಳು ಇದ್ದಲ್ಲಿ,ನಿರ್ದೇಶಕರು(ಪ್ರಾ.ಶಿ)ರವರಸುತ್ತೋಲೆ ಸಂಖ್ಯೆ ಸಿ7(1)ಪ್ರಾ.ಶಿ.ಅ/ಖಾ.ಶಾ.ವೊ/ 24/2010-11 ದಿನಾಂಕ:22.09.10 ರನ್ವಯ ಕಡ್ಡಾಯವಾಗಿ ಸೂಚನೆಗಳನ್ನು ಪಾಲಿಸುವುದು.
24. ಉಚಿತ & ಕಡ್ಡಾಯ ಶಿಕ್ಷಣ ಮಕ್ಕಳ ಹಕ್ಕು ಕಾಯ್ದೆ 2009 ಹಾಗೂ ನಿಯಮ 2012ರಂತೆ 25% ರಷ್ಟು ಸೀಟುಗಳನ್ನು ಮೀಸಲಾತಿ ಇಟ್ಟು ದಾಖಲಾತಿ ಮಾಡಿಕೊಳ್ಳಬೇಕಾಗಿರುವುದು ಕಡ್ಡಾಯ ವಾಗಿರುತ್ತದೆ.
25. ಕರ್ನಾಟಕ ಸಂಘಗಳ ನೊಂದಣಿ ನಿಯಮ ಪ್ರಕಾರ ಪ್ರತಿ ವರ್ಷ ಆಡಿಟ್ ನಡೆಸಿ ವರದಿಯನ್ನು ಸಕ್ಷಮಪ್ರಾ ಸಲ್ಲಿಸುವುದು.
26. ಮಕ್ಕಳ ಸುರಕ್ಷತೆ ಬಗ್ಗೆ ಇಲಾಖೆ ಹೊರಡಿಸಿರುವ ಮಾರ್ಗಸೂಚಿ ಪ್ರಕಾರ ಕ್ರಮ ಕೈಗೊಳ್ಳತಕ್ಕದ್ದು.

ದಿನಾಂಕ: 31.05.2016

(ಹೆಚ್.ಬಿ.ಮಂಜುನಾಥ್)
ಉಪನಿರ್ದೇಶಕರು ಹಾಗೂ ನೋಂದಣಾಧಿಕಾರಿ

ಪ್ರತಿಗಳು:
1. ಕಾರ್ಯದರ್ಶಿಗಳು, ಶ್ರೀ ಜಗದ್ಗುರು ತೋಂಟದಾರ್ಯ ವಿದ್ಯಾಪೀಠ, ಗದಗ್-582101

SECRETARY
Sadguru Tontadarya Vidyapeetha
GADAG - 582 101 (Karnataka)

Hr. PRIMARY PERMISSION

(6)

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ,

ಮಂಜೂರಾತಿ ನೀಡಿದ ಕಛೇರಿ ವಿಳಾಸ:

ಮಂಜೂರಾತಿ ನೀಡಿದ ಕಛೇರಿ ವಿಳಾಸ:

ದಿನಾಂಕ: 29-J

[ನಿಯಮ 3 ಉಪನಿಯಮ 5(ಬಿ)

ಪ್ರಮಾಣ ಪತ್ರ ಸಂಖ್ಯೆ: 4800/2018-19

SAMPIGE MAHARUDRAYYA ENGLISH MEDIUM SCHOOL CHIKKABANAVAR ( KEMPAPUR ROAI CHIKKABANAVAR, BANGALORE NORTH, BANGALORE )

ಇವರ ಗೌವರ್ನಿಂಗ್ ಕೌನ್ಸಿಲ್ ಈ ಶಿಕ್ಷಣ ಸಂಸ್ಥೆಯ ಹೊಸ ಪ್ರಾಥಮಿಕ ಶಾಲೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 [ಕರ್ನಾಟಕ ಆಕ್ಟ್ 1995] ಸಕ್ಷನ ಈ ಕೆಳಕಂಡ To strive for the welfare of the society irrespective of caste, creade color, sex, language in any ಪ್ರಾಥಮಿಕ (6 ರಿಂದ 8) (Upgradation from 6th to 8th) ಪ್ರಾರಂಭಿಸಲು ಮಂಜೂರಾತಿ ನೀಡಿ ನೊಂದಾಯಿಸಲಾಗಿದೆ ಎಂದು ಪ್ರಮಾಣೀಕ

1. ಅರ್ಜಿ ಸಂಖ್ಯೆ : 180350

2. ಕ್ರಮ ಸಂಖ್ಯೆ : 4800

3. ಶಾಲೆಯ ಹೆಸರು ಮತ್ತು ವಿಳಾಸ : SAMPIGE MAHARUDRAYYA ENGLISH MEDIUM SCHOOL CHIKKABANA KEMPAPUR ROAD, CHIKKABANAVAR, BANGALORE NORTH, BANGALORE )

4. ಅನುಮತಿ ನೀಡಿದ ತರಗತಿ : Upgradation from 6th to 8th

5. ಶೈಕ್ಷಣಿಕ ವರ್ಷ : 2018-19

6 ಅನುಮತಿ ನೀಡಿದ ಮಾಧ್ಯಮ : English

ಸದರಿ ಶಿಕ್ಷಣ ಸಂಸ್ಥೆಯನ್ನು ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ. ಕ್ರಮ ಸಂಖ್ಯೆ / ಪುಟ ಸಂಖ್ಯೆ / ವಾ ಸಂಖ್ಯೆ : 39 / 17 / 02

ಷರತ್ತುಗಳು

1. ಈ ನೋಂದಾವಣೆಯು ನಿಯಮ 3[5][4]ಕ್ಕೆ ಒಳಪಟ್ಟಿರುತ್ತದೆ.
2. ಗೌವರ್ನಿಂಗ್ ಕೌನ್ಸಿಲ್ ಇವರು ನಿಯಮ 4[4]ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಒಳಪಟ್ಟಿರುತ್ತದೆ. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿ
4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದ ಮಾಡಲು ಅವಕಾಶವಿರುವುದಿಲ್ಲ. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯ ಅದೇ ಹೆಸರಿನಲ್ಲಿ ನಡೆಸತಕ್ಕದ್ದು.
5. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 [ಕರ್ನಾಟಕ ಆಕ್ಟ್ ಸಂಖ್ಯೆ:1:96] ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

26/11/22 ಮುಂದುವ

CHAIRMAN
JAGADGURU TONTADARYA VIDYAPEETA
S.M. SCHOOL CBSE
Chikkabanavara Kempapura Main Road,
Bengaluru - 560 090.

6. ಈ ಪ್ರೌಢಶಾಲಾ ನೊಂದಾವಣೆಯಂತೆ ಸರ್ಕಾರಿ ಅಧಿಸೂಚನೆ ಸಂ: ಇಡಿ:175:ಪಿಎಂಸಿ:95, ದಿ:07-09-1998 ಮತ್ತು ದಿ:29-12-19 ಶಾಶ್ವತ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 10 ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.

7. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು [ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ನಿಬಂಧನೆಗಳು] ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

8. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.

9. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಕನಿಷ್ಠ ಹಾಜರಾತಿ 25 ಇರತಕ್ಕದ್ದು.

10. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು. ಕನಾ ಮಸೂದೆ ಅನುಚ್ಛೇದ 8ರ ಅಡಿಯಲ್ಲಿ ಉಪಬಂಧ 36-39ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳ ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯ ಬರುವುದು.

11. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

12. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಇರಿಸತಕ್ಕದ್ದು.

13. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟ ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.

14. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿ ಮಾಹಿತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಮು ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ರದ್ದಾಗುವುದು.

15. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.

16. ಪ್ರಥಮ ಮಾನ್ಯತೆಗಾಗಿ ಉಪನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸುವುದು. ಉಪನಿರ್ದೇಶಕರು ಶಿಕ್ಷಣ ಕಾಯ್ದೆ ಮತ್ತು ಸರ್ಕಾರದ ಆದೇಶ ದಿನಾಂ 2007ರ ಅನುಬಂಧ-3ರ ಚೆಕ್ ಲಿಸ್ಟ್ ಮಾಹಿತಿ ಪಡೆದು ಈ ಆಧಾರದ ಮೇಲೆ ಶಾಲೆ ಪ್ರಾರಂಭಿಸಿದ ಮೂರು ತಿಂಗಳೊಳಗೆ ಕಡ್ಡಾಯವಾಗಿ ಪ್ರಥ ನೀಡುವುದು. ನಿಗದಿತ ಅವಧಿಯೊಳಗೆ ಮಾನ್ಯತೆ ಪಡೆಯದಿದ್ದಲ್ಲಿ ನೋಂದಣಿ ತಂತಾನೆ ರದ್ದಾಗುತ್ತದೆ.

17. ಶಾಲೆಯ ಕಟ್ಟಡ ಸುರಕ್ಷತೆಯ ಬಗ್ಗೆ ಬೆಂಕಿ, ಬಿರುಗಾಳಿ, ವಿದ್ಯುತ್ ಅಪಘಾತ ಮುಂತಾದ ಅಪಘಡಗಳಿಂದ ಸುರಕ್ಷಿತವಾಗಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು. ಶಾಲಾ ಆವರಣದ 100 ಗಜಗಳ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟವನ್ನು ನಿಷೇಧಿಸಿದೆ ಎಂ ಮುಂಭಾಗದಲ್ಲಿ ಪ್ರಕಟಣೆ ನೀಡುವುದು.

18. ಶಾಲಾ ಆಡಳಿತ ಮಂಡಳಿ ಯಾವುದೇ ತಪ್ಪು ಮಾಹಿತಿಗಳನ್ನು ನೀಡಿದ್ದಲ್ಲಿ ನೋಂದಣಿಯನ್ನು ರದ್ದುಪಡಿಸುವ ಅಧಿಕಾರ ಇಲಾಖೆ ಕಾಯ್ದಿರಿಸಿಕ

19. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 369 ಪಿ.ಜಿ.ಸಿ 2014, ದಿನಾಂಕ: 11.11.2014ರಂತೆ ಮತ್ತು ಈ ಕಛೇರಿ ಸುತ್ತೋಲ 14.11.2014ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

20. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 709 ಪಿ.ಜಿ.ಸಿ 2017, ದಿನಾಂಕ: 07.03.2018ರಂತೆ ಮತ್ತು ಈ ಕಛೇರಿ ಸುತ್ತೋಲ 26.03.2018ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

ಉಪನಿರ್ದೇಶಕರು,
ಸಾರ್ವಜನಿಕ ಶಿಕ್ಷಣ ಇಲಾಖೆ,

1. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ,
2. ಕಾರ್ಯದರ್ಶಿಗಳು, SAMPIGE MAHARUDRAYYA ENGLISH MEDIUM SCHOOL CHIKKABANAVAR (KE ROAD, CHIKKABANAVAR, BANGALORE NORTH, BANGALORE)
3. ಕಛೇರಿ ಪ್ರತಿ.